# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1267

ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 29.12.2022

ಉತ್ತರಿಸುವವರು : ಸನ್ಮಾನ್ಯ ಮುಖ್ಯಮಂತ್ರಿಯವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅರಣ್ಯ ಇಲಾಖೆಯಡಿಯಲ್ಲಿ ಎಷ್ಟು ನಿಗಮಗಳು ಕಾರ್ಯನಿರ್ವಹಿಸುತ್ತಿವೆ? ಸದರಿ ನಿಗಮಗಳು ಲಾಭದಾಯಕವಾಗಿ ನಡೆಯುತ್ತಿವೆ ಅಥವಾ ನಷ್ಟದಲ್ಲಿದೆಯೇ; ಒಂದು ವೇಳೆ ನಷ್ಟದಲ್ಲಿದ್ದಲ್ಲಿ ಅವುಗಳ ಪುನಃಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕಾರ್ಯಯೋಜನೆಗಳೇನು? | ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿ ಈ ಕೆಳಕಂಡ ನಿಗಮಗಳು ಕಾರ್ಯನಿರ್ವಹಿಸುತ್ತಿವೆ:-<br>1. ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ.<br>2. ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ.<br>3. ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತ.<br><br>ಪ್ರಸ್ತುತ ಮೇಲ್ಕಂಡ ನಿಗಮಗಳು ಲಾಭದಾಯಕವಾಗಿ ನಡೆಯುತ್ತಿವೆ<br>ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಅಪಜೀ 55 ಎಫ್‌ಪಿಸಿ 2022, ದಿನಾಂಕ: 05.08.2022 ರಲ್ಲಿ ಸರ್ಕಾರವು ಈ ನಿಗಮಗಳನ್ನು ವಿಲೀನಗೊಳಿಸಿ **"ಕರ್ನಾಟಕ ಅರಣ್ಯ ನಿಗಮ"** ಎಂದು ರಚಿಸಿ ಆದೇಶಿಸಿದೆ.<br><br>ವಿಲೀನಾತಿ ನಂತರದ ಪ್ರಕ್ರಿಯೆಗಳು ಜಾರಿಯಲ್ಲಿವೆ. |
| ಆ) | ರಾಜ್ಯಾದ್ಯಂತ ಮತ್ತು ಬೆಂಗಳೂರು ನಗರದಲ್ಲಿ ಪರಿಸರ ಮಾಲಿನ್ಯ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | **<u>ಪರಿಸರ ಇಲಾಖೆಯ ಉತ್ತರ</u>**:-<br><br>ಪರಿಸರ ಇಲಾಖೆಯ ವ್ಯಾಪ್ತಿಯ ಅಧೀನದಲ್ಲಿ ಬರುವ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ರಾಷ್ಟ್ರೀಯ ವಾಯು ಗುಣಮಟ್ಟ ಪರಿಶೀಲನಾ ಕಾರ್ಯಕ್ರಮದ (NAMP) ಅಡಿಯಲ್ಲಿ ಬೆಂಗಳೂರು ನಗರವಲ್ಲದೇ ರಾಜ್ಯದ ಪ್ರಮುಖ ನಗರಗಳಲ್ಲಿ ವಾಯು ಗುಣಮಟ್ಟವನ್ನು ಮಾಪನ ಮಾಡುತ್ತಿದೆ.<br><br>ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಮಾರ್ಗ ಸೂಚಿಯಂತೆ ರಾಜ್ಯದಲ್ಲಿ ಒಟ್ಟು 37 ಮಾನವ ಚಾಲಿತ ವಾಯು ಮಾಪನ ಕೇಂದ್ರಗಳು (Manual Monitoring Stations) ಒಳಗೊಂಡಂತೆ, 31 ನಿರಂತರ ಪರಿವೇಷ್ಟಕ ವಾಯು ಗುಣಮಟ್ಟ ಮಾಪನ ಕೇಂದ್ರಗಳನ್ನು (Continuous Ambient Air Quality Monitoring Stations) ಸ್ಥಾಪಿಸಿ, ವಾಯು ಗುಣಮಟ್ಟವನ್ನು ಮಾಪನ ಮಾಡಲಾಗುತ್ತದೆ. |

31 ನಿರಂತರ ವಾಯು ಗುಣಮಟ್ಟ ಮಾಪನ ಕೇಂದ್ರಗಳಲ್ಲಿ ಸತತ ಇಪ್ಪತ್ನಾಲ್ಕು ಗಂಟೆಗಳ ಕಾಲ ಗಂಧಕದ ಡೈಆಕ್ಸೈಡ್ ($SO_2$) ಸಾರಜನಕದ ಡೈಆಕ್ಸೈಡ್ ($NO_2$), ಧೂಳಿನ ಕಣಗಳು, ($PM_{10}$) ($PM_{2.5}$) ಇಂಗಾಲದ ಮಾನಾಕ್ಸೈಡ್ . (CO), ಓಜೋನ್ ($O_3$), ಅಮೋನಿಯಾ ($NH_3$) ಮತ್ತು ಬೆನ್‌ಜೀನ್ (Benzene) ಸೇರಿದಂತೆ ಎಂಟು ಮಲಿನಕಾರಕಗಳನ್ನು ಮಾಪನ ಮಾಡಲಾಗುತ್ತಿದೆ ಹಾಗೂ 37 ಮಾನವ ಚಾಲಿತ ಕೇಂದ್ರಗಳಲ್ಲಿ (Manual Stations) 24 ಗಂಟೆಗಳ ಕಾಲ, ವಾರಕ್ಕೆ 2 ಬಾರಿ, ಗಂಧಕದ ಡೈಆಕ್ಸೈಡ್ ($SO_2$), ಸಾರಜನಕದ ಡೈಆಕ್ಸೈಡ್ ($NO_2$), ಧೂಳಿನ ಕಣಗಳ ಗಾತ್ರ 10 ಮೈಕ್ರಾನ್ ಹಾಗೂ 2.5 ಮೈಕ್ರಾನ್ ($PM_{10}$), ($PM_{2.5}$), ಅಮೋನಿಯ ಮತ್ತು ಸೀಸ ಮಲಿನಕಾರಕಗಳನ್ನು ವಿಶ್ಲೇಷಿಸಲಾಗುತ್ತಿದೆ. ಸದರಿ ಮಾಪನದಿಂದ ಸಂಗ್ರಹಿಸಿದ ದತ್ತಾಂಶವನ್ನು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ, ದಹಲಿಗೆ ವಿದ್ಯುನ್ಮಾನ ಮೂಲಕ ಕಳುಹಿಸಲಾಗುತ್ತಿದೆ ಮತ್ತು ಮಂಡಳಿಯ ಅಂತರ್ಜಾಲದಲ್ಲಿ (ವೆಬ್‌ಸೈಟ್) ಪ್ರಕಟಿಸಲಾಗುತ್ತಿದೆ.

ವಾಯು ಮಾಪನದ ದತ್ತಾಂಶವನ್ನು ಸಂಬಂಧಪಟ್ಟ ಇಲಾಖೆಗಳಿಗೆ ವಾಯು ಮಾಲಿನ್ಯ ನಿಯಂತ್ರಿಸುವ ನಿಟ್ಟಿನಲ್ಲಿ ಕ್ರಿಯಾಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸೂಚಿಸಿ ನಿಯತಕಾಲಿಕವಾಗಿ ಸಲ್ಲಿಸಲಾಗುತ್ತಿದೆ. ಪ್ರತಿದಿನ ಬೆಂಗಳೂರಿನ ಏಳು ನಿರಂತರ ಪರಿವೇಷ್ಟಕ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕವನ್ನು (AQI) ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರುಗಳಿಗೆ ಹಾಗೂ ವಾರ್ತಾ ಇಲಾಖೆಗೆ ಎಸ್.ಎಂ.ಎಸ್ ಮುಖಾಂತರ ಕಳುಹಿಸಲಾಗುತ್ತಿದೆ.

ಸರ್ಕಾರದ ಪರಿಸರ ಮತ್ತು ಜೀವಿಪರಿಸ್ಥಿತಿ ಇಲಾಖೆಯು ಬೆಂಗಳೂರು ನಗರದ ವಾಯು ಗುಣಮಟ್ಟ ಉತ್ತಮ ಪಡಿಸುವ ನಿಟ್ಟಿನಲ್ಲಿ ಅಧಿಸೂಚನೆ ಸಂಖ್ಯೆ:ಅಪಜೀ 120 ಇಸಿಓ 2002 ದಿನಾಂಕ:2-12-2003ರಲ್ಲಿ 14 ಅಂಶಗಳ ಕಾರ್ಯಯೋಜನೆ ತಯಾರಿಸಿ ಅನುಷ್ಠಾನಗೊಳಿಸಿರುತ್ತದೆ

ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ 2019-20ನೇ ಸಾಲಿನಲ್ಲಿ ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ 44 ಅಂಶಗಳ ಕ್ರಿಯಾ ಯೋಜನೆಗಳಿದ್ದು, ಅವುಗಳನ್ನು ಸಂಬಂಧಪಟ್ಟ ಇಲಾಖೆಗಳು ಅನುಷ್ಠಾನಗೊಳಿಸಲಾಗುತ್ತಿದೆ. ಇದರೊಂದಿಗೆ ವಾಯು ಮಾಲಿನ್ಯಕ್ಕೆ ಕಾರಣವಾದ ಮೂಲಗಳ (Source Apportionment and Emission Inventory Study) ಅಧ್ಯಯನವನ್ನು Centre for Study for Science, Technology and Policy(CSTEP) Bengaluru,, ರವರಿಗೆ ವಹಿಸಲಾಗಿದ್ದು, ಅಧ್ಯಯನದ ವರದಿ ಆಧಾರದ ಮೇಲೆ ಕ್ರಿಯಾ ಯೋಜನೆ ಪರಿಷ್ಕರಿಸಿ, ವಿವಿಧ ಇಲಾಖೆಗಳ ಸಂಯೋಗದೊಂದಿಗೆ ವಾಯು ಮಾಲಿನ್ಯ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಂಗಳೂರು ನಗರದ ವಾಯು ಗುಣಮಟ್ಟದ ಸುಧಾರಣೆಗಾಗಿ 15ನೇ ಹಣಕಾಸು ಆಯೋಗವು ಕೇಂದ್ರದ ವಸತಿ ಮತ್ತು ನಗರಾಭಿವೃದ್ಧಿ ಮಂತ್ರಾಲಯವನ್ನು ನೋಡಲ್ ಸಚಿವಾಲಯವನ್ನಾಗಿ ಗೊತ್ತುಪಡಿಸಿ, ವಾಯು ಮಾಲಿನ್ಯ ನಿಯಂತ್ರಣಕ್ಕಾಗಿ ನೀಡಿರುವ ಅನುದಾನವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು(BBMP) 9 ಅಂಶಗಳ ಪರಿಷ್ಕೃತ ಕಾರ್ಯ ಯೋಜನೆಯನ್ನು ಸಿದ್ಧಪಡಿಸಿ, ಕಾರ್ಯಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.

ಅಲ್ಲದೆ, ವಾಯು ಮಾಲಿನ್ಯ ತಡೆಗೆ ಈ ಕೆಳಕಂಡ ಕ್ರಮಗಳನ್ನು ಸಹಾ ಕೈಗೊಳ್ಳಲಾಗಿದೆ:-

- ಪರಿಸರ (ಸಂರಕ್ಷಣಾ) ಕಾಯ್ದೆ, 1986 ರಲ್ಲಿ ನಿಗದಿಪಡಿಸಿರುವಂತೆ ವಾಯು ಮಾನಕಗಳು ನಿಗದಿಪಡಿಸಿದ ಪರಿಮಿತಿಯೊಳಗಿರುವಂತೆ ಕಾರ್ಖಾನೆಗಳಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನೀಡುವ ಸಮ್ಮತಿ ಪತ್ರದಲ್ಲಿ ನಿಬಂಧನೆ ಹಾಕಲಾಗುತ್ತಿದೆ ಹಾಗೂ ಆಗಿಂದಾಗ್ಗೆ ಕಾರ್ಖಾನೆಗಳನ್ನು ಪರಿವೀಕ್ಷಣೆಗೊಳಪಡಿಸಲಾಗುತ್ತಿದೆ.

- [illegible] ಹಾಗೂ ಇನ್ನಿತರ ಅಧಿಕ ಮಾಲಿನ್ಯ ಉಂಟುಮಾಡುವ ಕೈಗಾರಿಕೆಗಳಿಗೆ ನಿರಂತರ ಎಮಿಶನ್ ಮಾಪನ ಉಪಕರಣಗಳನ್ನು ಅಳವಡಿಸಿ ಮಾಪನ ವರದಿಯನ್ನು ಕೇಂದ್ರ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಂತರ್ಜಾಲಗಳಿಗೆ ಸಂಪರ್ಕ ಕಲ್ಪಿಸಲಾಗಿದೆ ಇದರಿಂದ ಕೈಗಾರಿಕೆಗಳು ನಿಗಧಿ ಪಡಿಸಿದ ಮಾನಕಕ್ಕಿಂತ ಹೆಚ್ಚು ಹೊಗೆ ಹೊರಸೂಸದಂತೆ ಕಾಲಕಾಲಕ್ಕೆ ಇವುಗಳ ಕಾರ್ಯಕ್ಷಮತೆಯನ್ನು ಪರೀಕ್ಷಿಸಿ ಮಂಡಳಿಯಿಂದ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ

- ಘನತ್ಯಾಜ್ಯ ಸುಡುವುದರಿಂದಾಗುವ ವಾಯು ಮಾಲಿನ್ಯವನ್ನು ತಡೆಯುವ ದೃಷ್ಟಿಯಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 06 ಇಎನ್‌ಜಿ 2017, ದಿನಾಂಕ:03.08.2017ರಲ್ಲಿ ರಾಜ್ಯ ಸರ್ಕಾರವು ವಾಯು (ಮಾಲಿನ್ಯ ನಿಯಂತ್ರಣ ಮತ್ತು ನಿವಾರಣೆ) ಕಾಯ್ದೆ, 1981ರ ಕಲಂ19(5) ರಡಿಯಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಬೃಹತ್ ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯನ್ನು ಸೇರಿದಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ರಾಜ್ಯಾದ್ಯಂತ ಇರುವ ಘನತ್ಯಾಜ್ಯ ಭೂಭರ್ತಿ ಘಟಕಗಳಲ್ಲಿನ ತೆರೆದ ಜಾಗದಲ್ಲಿ ಮರಗಿಡಗಳ ರೆಂಬೆ ಮತ್ತು ಎಲೆಗಳೂ ಸೇರಿದಂತೆ ಯಾವುದೇ ರೀತಿಯ ಘನತ್ಯಾಜ್ಯಗಳನ್ನು ಸುಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.
- ಕಟ್ಟಡಗಳ ನಿರ್ಮಾಣ ಮತ್ತು ಕಟ್ಟಡ ಉರುಳಿಸುವ ಸಮಯದಲ್ಲಿ ಉಂಟಾಗುವ ಘನತ್ಯಾಜ್ಯಗಳನ್ನು (Construction & Demolition Waste) ವಾಹನಗಳಲ್ಲಿ ಸಾಗಿಸುವ ಸಮಯದಲ್ಲಿ ಅವುಗಳನ್ನು ಸೂಕ್ತ ರೀತಿಯಲ್ಲಿ ಮುಚ್ಚಿಕೊಂಡು ಸಾಗಿಸುವಂತೆ ಹಾಗೂ ಅವುಗಳಿಗೆ ನೀರಿನ ಸಿಂಪರಣೆ ಮಾಡಿ ಯಾವುದೇ

| | | |
|---|---|---|
| | | ರೀತಿಯಲ್ಲಿ ವಾಯು ಮಾಲಿನ್ಯ ಆಗದಂತೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರಿಗೂ ಸೇರಿದಂತೆ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಿ.ಎಂ.ಆರ್.ಸಿ.ಎಲ್, ಕೆ.ಆರ್.ಡಿ.ಎಲ್, ಸಿ.ಪಿ.ಡಬ್ಲ್ಯೂ.ಡಿ, ಪಿ.ಡಬ್ಲ್ಯೂ.ಡಿ, ಇಲಾಖೆಗಳಿಗೆ ಅಗತ್ಯ ನಿರ್ದೇಶನ ನೀಡಲಾಗಿದೆ.<br>• ವಾಹನಗಳ ಹೊಗೆ ತಪಾಸಣಾ ಜವಾಬ್ದಾರಿ ಸಾರಿಗೆ ಇಲಾಖೆಯ ವ್ಯಾಪ್ತಿಯಲ್ಲಿದೆ. ಅದಾಗ್ಯೂ, ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯ(ಧೂಳಿನ ಕಣ)ಕ್ಕೆ ಸಾರಿಗೆ ವಲಯ ಪ್ರಮುಖ ಕಾರಣವಾಗಿರುವುದನ್ನು ಅಧ್ಯಯಿಸಿರುವುದರಿಂದ ಮಂಡಳಿಯು ಡೀಸಲ್ ಮತ್ತು ಪೆಟ್ರೋಲ್ ವಾಹನಗಳು ಹೊರಸೂಸುವ ಹೊಗೆಯನ್ನು ಮಾಪನ ಮಾಡಲು ಸುಸಜ್ಜಿತ ಉಪಕರಣಗಳನ್ನೊಳಗೊಂಡ 12 ಹೊಗೆ ಮಾಪನ ಮಾಡುವ ಸಂಚಾರಿ ವಾಹನಗಳನ್ನು ಖರೀದಿಸಿದ್ದು, ಈ 12 ವಾಹನಗಳ ಪೈಕಿ 6 ವಾಹನಗಳು ಬೆಂಗಳೂರು ನಗರಕ್ಕೆ ಹಂಚಿಕೆ ಮಾಡಲಾಗಿದ್ದು, ಉಳಿದ ವಾಹನಗಳು ರಾಜ್ಯದ ಇತರೆ ನಗರಗಳಾದ ಮೈಸೂರು, ಕಲುಬುರ್ಗಿ, ಧಾರವಾಡ, ಮಂಗಳೂರು ಹಾಗೂ ಬಳ್ಳಾರಿ ಜಿಲ್ಲೆಗೆ ಹಂಚಿಕೆ ಮಾಡಲಾಗಿದೆ. ಸದರಿ ವಾಹನಗಳು ಸಾರಿಗೆ ಇಲಾಖೆ, ಪೊಲೀಸ್ ಇಲಾಖೆ, ಬಿ.ಎಂ.ಟಿ.ಸಿ ಮತ್ತು ಕೆ.ಎಸ್.ಆರ್.ಟಿ.ಸಿ ಸಂಸ್ಥೆಗಳ ಸಹಾಯದೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದ್ದು, ಮಿತಿಗಿಂತ ಹೆಚ್ಚು ಹೊಗೆ ಹೊರಸೂಸುವ ವಾಹನಗಳ ಮೇಲೆ ಕಾನೂನಾತ್ಮಕವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಮಂಡಳಿಯ ಕಾಯ್ದೆ/ನಿಯಮಗಳಡಿಯಲ್ಲಿ ಉದ್ದಿಮಗಳಿಗೆ/ಸಂಸ್ಥೆಗಳಿಗೆ ಸಮ್ಮತಿ ಪತ್ರ/ಅಧಿಕಾರ ಪತ್ರಗಳನ್ನು ನೀಡುವಾಗ ಮಾಲಿನ್ಯ ನಿಯಂತ್ರಣಕ್ಕೆ ನಿಬಂಧನೆಗಳನ್ನು ವಿಧಿಸುತ್ತದೆ ಹಾಗೂ ಈ ನಿಬಂಧನೆಗಳ ಪಾಲನೆ ಖಾತರಿಪಡಿಸಿಕೊಳ್ಳಲು ನಿಯಮಿತವಾಗಿ ತಪಾಸಣೆ ಹಾಗೂ ಮಾಪನ ಕೈಗೊಳ್ಳುತ್ತದೆ. ಷರತ್ತು/ನಿಬಂಧನೆಗಳ ಉಲ್ಲಂಘನೆಯಾಗಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಮಂಡಳಿಯು ಜಲ ಮತ್ತು ವಾಯು ಕಾಯ್ದೆಯಡಿಯಲ್ಲಿ ನೀಡುವ ಸಮ್ಮತಿ ಪತ್ರದಲ್ಲಿ ನಿಗದಿತ ಮಾನದಂಡಗಳನ್ನು ಕೊಚ್ಚು ನೀರು ಸಂಸ್ಕರಣೆಗೆ ಮತ್ತು ಕಲುಷಿತ ನೀರು ಸಂಸ್ಕರಣೆಗೆ ಹಾಗೂ ಕೈಗಾರಿಕಾ ವಾಯು ಮಾಲಿನ್ಯ ಹೊರಸೂಸುವಿಕೆಗೆ ಗುಣ ಮಾನಕಗಳನ್ನು ನಿಗಧಿಪಡಿಸುತ್ತದೆ. ಸದರಿ ಮಾನದಂಡಗಳನ್ನು ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯವು ಮತ್ತು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ಆಗಿಂದಾಗ್ಗೆ ಅಧಿಸೂಚನೆ/ಮಾರ್ಗಸೂಚಿಗಳ ಮೂಲಕ ನೀಡುತ್ತಿರುತ್ತದೆ. ಈ ಗುಣ ಮಾನಕಗಳನ್ನು ಕೈಗಾರಿಕೆಗಳಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ಮಂಡಳಿಯಲ್ಲಿ ಕ್ರಮ ಕೈಗೊಳ್ಳುತ್ತದೆ. |

| | | |
|---|---|---|
| ಇ) | ಕಾರ್ಖಾನೆಗಳು ಹೊರಸೂಸುವ ವಿಷಾನಿಲ ಮತ್ತ ವಾಹನ ದಟ್ಟಣೆ ಸಮಸ್ಯೆಯಿಂದ ಪರಿಸರ ಮಾಲಿನ್ಯವು ಹೆಚ್ಚಾಗುತ್ತಿರುವುದರಿಂದ ಇಂತಹ ಕಾರ್ಖಾನೆಗಳ ವಿರುದ್ಧ ಪರಿಸರ ಸಂರಕ್ಷಣಾ ಕಾಯ್ದೆಯಡಿ ಏನು ಕ್ರಮಕೈಗೊಳ್ಳಲಾಗಿದೆ ಮತ್ತು ಪ್ರಮುಖವಾಗಿ ಬೆಂಗಳೂರಿನಲ್ಲಿ ವಾಹನ ದಟ್ಟಣೆಯಿಂದ ಅಧಿಕವಾಗಿ ಪರಿಸರ ಮಾಲಿನ್ಯ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಕೈಗೊಂಡ ಕ್ರಮಗಳೇನು? | ಪರಿಸರ (ಸಂರಕ್ಷಣಾ) ಕಾಯ್ದೆ, 1986 ರಲ್ಲಿ ನಿಗಧಿಪಡಿಸಿರುವಂತೆ ವಾಯು ಮಾನಕಗಳು ನಿಗದಿಪಡಿಸಿದ ಪರಿಮಿತಿಯೊಳಗಿರುವಂತೆ ಕಾರ್ಖಾನೆಗಳಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನೀಡುವ ಸಮ್ಮತಿ ಪತ್ರದಲ್ಲಿ ಷರತ್ತುಗಳನ್ನು ವಿಧಿಸುತ್ತಿದೆ ಹಾಗೂ ಆಗಿಂದಾಗ್ಗೆ ಕಾರ್ಖಾನೆಗಳನ್ನು ಪರಿವೀಕ್ಷಣೆಗೊಳಪಡಿಸಲಾಗುತ್ತಿದೆ<br><br>ಮಾಲಿನ್ಯವನ್ನುಂಟು ಮಾಡುವ ಕೈಗಾರಿಕೆಗಳ ವಿರುದ್ಧ ಕಾನೂನಿನ ಅಡಿ ಕ್ರಮಜರುಗಿಸಲಾಗುತ್ತಿದೆ. ರಾಸಾಯನಿಕ ಹಾಗೂ ಇನ್ನಿತರ ಅಧಿಕ ಮಾಲಿನ್ಯ ಉಂಟುಮಾಡುವ ಕೈಗಾರಿಕೆಗಳಿಗೆ ನಿರಂತರ ವಾಯು ಮಾಲಿನ್ಯ ಮಾಪನ ಉಪಕರಣಗಳನ್ನು ಅಳವಡಿಸಿ ಮಾಪನ ವರದಿಯನ್ನು ಕೇಂದ್ರ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಬೆಂಗಳೂರಿನಲ್ಲಿ ವಾಹನ ದಟ್ಟಣೆಯಿಂದ ಅಧಿಕವಾಗಿ ಪರಿಸರ ಮಾಲಿನ್ಯ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯ ನಿಯಂತ್ರಣಕ್ಕೆ ಸಂಬಂಧಿಸಿದಂತೆ 44 ಅಂಶಗಳ ಕ್ರಿಯಾಯೋಜನೆಗಳಿದ್ದು, ಅವುಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ ಸದರಿ ಕ್ರಿಯಾ ಯೋಜನೆಗಳಲ್ಲಿ ಸಂಚಾರ ದಟ್ಟಣೆಯನ್ನು ತಿಳಿಗೊಳಿಸುವ ಅಂಶಗಳೂ ಸಹ ಒಳಗೊಂಡಿರುತ್ತವೆ ಹಾಗೂ ಈ ಎಲ್ಲಾ ಅಂಶಗಳನ್ನು ಅನುಷ್ಠಾನಗೊಳಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಚಾಲನಾ ಸಮಿತಿ (Steering Committee) ರಚಿಸಲಾಗಿದ್ದು, ವಾಯು ಮಾಲಿನ್ಯ. ನಿಯಂತ್ರಣ ಕಾರ್ಯಪಡೆಯಾಗಿಯೂ(Task Force) ಸಹ ಕಾರ್ಯನಿರ್ವಹಿಸುತ್ತಿದೆ. ಇದಲ್ಲದೆ ರಾಜ್ಯ ಸರ್ಕಾರದ ಪರಿಸರ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉಸ್ತುವಾರಿ ಸಮಿತಿ (Monitoring Committee) ಸಹಾ ರಚಿಸಲಾಗಿದ್ದು, ವಿವಿಧ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವ ಮೂಲಕ ಸಂಚಾರ ದಟ್ಟಣೆ, ಹಾಗೂ ವಾಯು ಮಾಲಿನ್ಯ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ.<br><br>**<u>ಸಾರಿಗೆ ಇಲಾಖೆಯ ಉತ್ತರ:-</u>**<br>ವಾಹನದಿಂದ ಆಗುವ ವಾಯು ಮಾಲಿನ್ಯ ಕುರಿತು ಸಾರಿಗೆ ಇಲಾಖೆಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:-<br>ರಾಜ್ಯದಲ್ಲಿ ವಾಯುಮಾಲಿನ್ಯವನ್ನು ನಿಯಂತ್ರಿಸುವ ಸಲುವಾಗಿ ರಾಜ್ಯಾದ್ಯಂತ ವಾಯು ತಪಾಸಣಾ ಕೇಂದ್ರಗಳನ್ನು ಕರ್ನಾಟಕ ಮೋಟಾರು ವಾಹನ ನಿಯಮಗಳು 1989ರ ನಿಯಮ 231-ಬಿ ರೀತ್ಯಾ ಸ್ಥಾಪಿಸಲು ಸಾರ್ವಜನಿಕರಿಗೆ ಅನುಮತಿ ನೀಡಲಾಗುತ್ತಿದೆ. ಸದರಿ ಕೇಂದ್ರಗಳಲ್ಲಿ ಅಳವಡಿಸಿರುವ ಗ್ಯಾಸ್ ಅನಲೈಸರ್ (ಪೆಟ್ರೋಲ್ ಮತ್ತು ಗ್ಯಾಸ್) ಮತ್ತು ಸ್ಮೋಕ್ ಮೀಟರ್ (ಡೀಸಲ್) ಗಳನ್ನು ಉಪಯೋಗಿಸಿಕೊಂಡು ವಾಹನಗಳ ವಾಯುಮಾಲಿನ್ಯ ಮಾಪನವನ್ನು ಪರೀಕ್ಷಿಸಲಾಗುವುದು. ಕೇಂದ್ರ ಮೋಟಾರು ವಾಹನ ನಿಯಮಗಳು, 1989ರ ನಿಯಮ 115 ರನ್ವಯ ನಿಗಮದ ಎಲ್ಲಾ ವಾಹನಗಳನ್ನು ಅಂತರ್ಜಾಲಗೊಳಿಸಿದ ಹೊಗೆ ತಪಾಸಣಗೊಳಿಸಿದ ನಂತರ ವಾಹನಗಳನ್ನು ಕಾರ್ಯಾಚರಣೆಗೆ ನಿಯೋಜಿಸಲಾಗಿರುತ್ತಿದೆ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ 46 ಘಟಕಗಳಿಂದ ಆಚರಣೆಯಾಗುವ ಎಲ್ಲಾ ವಾಹನಗಳನ್ನು ಆಧುನಿಕ ಹೊಗೆ ತಪಾಸಣೆ ಯಂತ್ರಗಳಿಂದ ತಪಾಸಣೆ ನಡೆಸಿ ಹೊಗೆ ಸಾಂದ್ರತೆ ಪ್ರಮಾಣವನ್ನು 65 HSU ರೊಳಗೆ ಇರುವಂತೆ ಕ್ರಮಕೈಗೊಳ್ಳಲಾಗುತ್ತಿದೆ. |

| | | |
|---|---|---|
| | | ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಬಿಎಸ್-6 ಮತ್ತು ಎಲೆಕ್ಟ್ರಿಕ್ ವಾಹನಗಳನ್ನು ಸಾರಿಗೆ ನಿಗಮ/ಸಂಸ್ಥೆಗಳಲ್ಲಿ ಸೇರ್ಪಡೆಗೊಳಿಸುವ ಪ್ರಕ್ರಿಯೆ ಜಾರಿಯಲ್ಲಿದೆ. ಬೆಂಗಳೂರು ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ 90 ವಿದ್ಯುತ್ ಚಾಲಿತ ಬಸ್‌ಗಳು ಕಾರ್ಯಾಚರಣೆಯಲ್ಲಿದ್ದು, 300 ಎಲೆಕ್ಟ್ರಿಕ್ ಬಸ್‌ಗಳನ್ನು ಗುತ್ತಿಗೆ ಆಧಾರದ ಮೇಲೆ ಆಚರಣೆ ಮಾಡಲು ಯೋಜಿಸಿದ್ದು, ಪ್ರಸ್ತುತ 165 ವಾಹನಗಳು ಕಾರ್ಯಾಚರಣೆಯಲ್ಲಿರುತ್ತವೆ. ಮತ್ತು ಫೇಮ್-2 ಯೋಜನೆಯಡಿಯಲ್ಲಿ CESL ಮುಖಾಂತರ 921 ಎಲೆಕ್ಟ್ರಿಕ್ ಬಸ್ಸುಗಳನ್ನು ಕಾರ್ಯಚರಣೆ ಮಾಡಲು ಯೋಜಿಸಿದ್ದು, ಸದರಿ ಬಸ್ಸುಗಳನ್ನು ಹಂತ ಹಂತವಾಗಿ ಕಾರ್ಯಾಚರಣೆಗೊಳಿಸಲಾಗುತ್ತಿದೆ.<br><br>ಸಾರಿಗೆ ಇಲಾಖೆಯ ವತಿಯಿಂದ ಪ್ರತಿ ವರ್ಷ ನವೆಂಬರ್ ಮಾಹೆಯನ್ನು ವಾಯು ಮಾಲಿನ್ಯ ನಿಯಂತ್ರಣ ಜಾಗೃತಿ ಮಾಸವನ್ನಾಗಿ ಆಚರಿಸಲಾಗುತ್ತಿದೆ. ಸದರಿ ಕಾರ್ಯಕ್ರಮಕ್ಕೆ ಸರ್ಕಾರದಿಂದ ಒದಗಿಸಲಾಗುವ ಅನುದಾನದ ಬಳಕೆಯಿಂದ ಸಾರಿಗೆ ಇಲಾಖೆಯ ಅಧೀನದ ಎಲ್ಲಾ 67 ಕಚೇರಿಗಳ ವ್ಯಾಪ್ತಿಗಳಲ್ಲಿ ವಾಯು ಮಾಲಿನ್ಯ ನಿಯಂತ್ರಣ ಜಾಗೃತಿ ಕುರಿತು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಮತ್ತು 2021-22ನೇ ಸಾಲಿನಲ್ಲಿ ಹಸಿರು ತೆರಿಗೆ ರೂಪದಲ್ಲಿ ಸಂಗ್ರಹಿಸಿರುವ ರಾಜಸ್ವ ತೆರಿಗೆಯಲ್ಲಿ ವಾಯುಮಾಲಿನ್ಯ ಬಗ್ಗೆ ಸಾರ್ವಜನಿಕ ಸ್ಥಳಗಳು, ಶಾಲೆ/ಕಾಲೇಜುಗಳಲ್ಲಿ ಅರಿವು ಮೂಡಿಸುವ ಜಾಗೃತಿ ಅಭಿಯಾನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br><br>ಮಾಲಿನ್ಯಗಳ ಮಿತಿಯನ್ನು ಉಲ್ಲಂಘಿಸಿ ವಾಯುಮಾಲಿನ್ಯ ಉಂಟುಮಾಡುವ ವಾಹನಗಳ ಮೇಲೆ ಪ್ರವರ್ತನ ಚಟುವಟಿಕೆಯನ್ನು ಕೈಗೊಂಡು ಸದರಿ ವಾಹನಗಳ ಮೇಲೆ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |

ಸಂಖ್ಯೆ: ಅಪಜೀ 70 ಎಫ್ ಟಿಎಸ್ 2022

**(ಬಸವರಾಜ ಬೊಮ್ಮಾಯಿ)**
ಮುಖ್ಯಮಂತ್ರಿ